ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಹೆಚ್.ಆರ್.ಎಂ.ಎಸ್.ಆಧಾರ್-2015-16 ದಿನಾಂಕ:24-09-2016

ಅತೀ ಪ್ರಾಮುಖ್ಯ

ಸುತ್ತೋಲೆ

ವಿಷಯ: ಸರ್ಕಾರಿ ನೌಕರರು ಮತ್ತು ಕುಟುಂಬದ ಅವಲಂಬಿತ ಸದಸ್ಯರುಗಳ ಆಧಾರ್ ಸಂಖ್ಯೆಯನ್ನು ಮಾನವ ಸಂಪನ್ಮೂಲ ಯೋಜನೆ ತಂತ್ರಾಂಶದಲ್ಲಿ ಅಳವಡಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂಖ್ಯೆ.ಸಿಆಸುಇ 97 ಇಆಇ 2015 ಬೆಂಗಳೂರು ದಿನಾಂಕ:07.09.2016.

2. ಈ ಕಛೇರಿ ಪತ್ರ ಸಮಸಂಖ್ಯೆ ಇ-ಆಡಳಿತ.ಹೆಚ್.ಆರ್.ಎಂ.ಎಸ್1/15-16 ದಿನಾಂಕ:29.07.2015.

&&&

ಉಲ್ಲೇಖ(1)ರ ಸರ್ಕಾರದ ಸುತ್ತೋಲೆ ಪತ್ರದಲ್ಲಿ ಮಾನವ ಸಂಪನ್ಮೂಲ ಯೋಜನೆಯ [ಹೆಚ್.ಆರ್.ಎಂ.ಎಸ್.] ತಂತ್ರಾಂಶದಲ್ಲಿ ಶಿಕ್ಷಣ ಇಲಾಖೆಯ ಸರ್ಕಾರಿ ಅಧಿಕಾರಿ/ ಶಿಕ್ಷಕರ / ಸಿಬ್ಬಂದಿಗಳ ಆಧಾರ್ ಕಾರ್ಡ್ ವಿವರಗಳನ್ನು ಹಾಗೂ ಕುಟುಂಬದ ಅವಲಂಬಿತ ಸದಸ್ಯರುಗಳ ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸಲು ಸೂಚಿಸಲಾಗಿದೆ. ಉಲ್ಲೇಖ(2)ರ ಪತ್ರ ದಿನಾಂಕ:29.07.2015ರಲ್ಲಿ ಈಗಾಗಲೇ ಸುತ್ತೋಲೆ ಮುಖಾಂತರ ಕಡ್ಡಾಯವಾಗಿ ನಮೂದಿಸಲು ಎಲ್ಲಾ ವೇತನ ಸೆಳೆಯುವ ಅಧಿಕಾರಿಗಳು ಹಾಗೂ ಆಧಾರ್ ಸಂಖ್ಯೆ. ಹಾಗೂ ಎಪಿಕ್ ಕಾರ್ಡ್ ಸಂಖ್ಯೆಗಳನ್ನು ದಿನಾಂಕ:15.09.2015ರೊಳಗೆ ನಮೂದಿಸಿ ಪೂರ್ಣಗೊಳಿಸಲು ಸೂಚಿಸಲಾಗಿತ್ತು. ಅದರಂತೆ, ಶಿಕ್ಷಣ ಇಲಾಖೆಯ ಎಲ್ಲಾ ವೇತನ ಬಟವಾಡೆ ಅಧಿಕಾರಿಗಳು ತಮ್ಮ ಅಧೀನದ ಸಿಬ್ಬಂದಿಯ ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರ ಆಧಾರ್ ಸಂಖ್ಯೆಯನ್ನು ಮಾನವ ಸಂಪನ್ಮೂಲ ಯೋಜನೆಯ ತಂತ್ರಾಂಶದಲ್ಲಿ ನೊಂದಾಯಿಸಲು ಕ್ರಮವಹಿಸುವಂತೆ ಸೂಚಿಸಲಾಗಿದ್ದರೂ, ಆಧಾರ್ ಸಂಖ್ಯೆ ನೊಂದಾಯಿಸುವುದು ಬಾಕಿ ಉಳಿದಿದೆ. ಇದರಿಂದಾಗಿ "ಜ್ಯೋತಿ ಸಂಜೀವಿನಿ" ಯೋಜನೆಯ ಸಹಾಯ ಪಡೆಯುವಲ್ಲಿ ನೌಕರರು ವಂಚಿತರಾಗುತ್ತಿದ್ದಾರೆ. ಮಾನವ ಸಂಪನ್ಮೂಲ ಯೋಜನೆ ತಂತ್ರಾಂಶದಲ್ಲಿ ನೌಕರರನ್ನು "ಆಧಾರ್" ಸಂಖ್ಯೆ ಮೂಲಕ ಗುರುತಿಸುವ ಪ್ರಯತ್ನಕ್ಕೆ ಹಿನ್ನಡೆಯಾಗುತ್ತಿರುವುದಾಗಿ ತಿಳಿಸಿರುತ್ತಾರೆ. ಉಲ್ಲೇಖ(1)ರ ಸುತ್ತೋಲೆ ಪ್ರತಿ ಲಗತ್ತಿಸಿದೆ.

ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವೇತನ ಬಟವಾಡೆ ಅಧಿಕಾರಿ / ಶಿಕ್ಷಕರ / ಸಿಬ್ಬಂದಿ ವರ್ಗದವರ ಆಧಾರ್ ಕಾರ್ಡ್ ವಿವರಗಳಾದ ಆಧಾರ್ ಕಾರ್ಡ್ ಸಂಖ್ಯೆ.[Adhar Card No] ಹಾಗೂ ಎಪಿಕ್ ಸಂಖ್ಯೆ. [Epic Card No] ಗಳನ್ನು ನಮೂದಿಸುವುದು ಕಡ್ಡಾಯವಾಗಿದೆ.

ತಮ್ಮ ಅಧೀನದಲ್ಲಿರುವ ಎಲ್ಲಾ ಅಧಿಕಾರಿ / ಶಿಕ್ಷಕರ / ಸಿಬ್ಬಂದಿ ವರ್ಗದವರ ಆಧಾರ್ ಸಂಖ್ಯೆಯನ್ನು ಮಾನವ ಸಂಪನ್ಮೂಲ ಯೋಜನೆಯ (ಹೆಚ್.ಆರ್.ಎಂ.ಎಸ್.) ತಂತ್ರಾಂಶದಲ್ಲಿ ಅಳವಡಿಸಲು ತಕ್ಷಣ ಕ್ರಮಕೈಗೊಳ್ಳಲು ಎಲ್ಲಾ ವೇತನ ಬಟವಾಡೆ ಅಧಿಕಾರಿಗಳಿಗೆ ಮತ್ತೊಮ್ಮೆ ಸೂಚಿಸಲಾಗಿದೆ ಹಾಗೂ ಈ ಕಾರ್ಯವು ಅಕ್ಟೋಬರ್ 2016ರೊಳಗೆ ಪೂರ್ಣಗೊಳಿಸಲು ತಿಳಿಸಿದೆ.

ಒಂದು ವೇಳೆ ಯಾವುದೇ ವೇತನ ಬಟವಾಡೆ ಅಧಿಕಾರಿಯು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸದೆ ವಿಳಂಬ ಮಾಡಿದಲ್ಲಿ ಅಂತಹ ವೇತನ ಬಟವಾಡೆ ಅಧಿಕಾರಿಗಳ ನವೆಂಬರ್ 2016ರ ನಂತರ ವೇತನ ಬಿಲ್ಲು ತಯಾರಿಸಲು ತಂತ್ರಾಂಶದಲ್ಲಿ ಸಾಧ್ಯವಾಗದೆ ಇರಬಹುದು. ಹಾಗಾಗಿ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಲು ಸೂಚಿಸಿದೆ. ತಪ್ಪಿದಲ್ಲಿ ಮುಂದಿನ ಆಗು ಹೋಗುಗಳಿಗೆ ಸಂಬಂಧಪಟ್ಟ ವೇತನ ಬಟವಾಡೆ ಅಧಿಕಾರಿಗಳೇ ನೇರ ಜವಾಬ್ದಾರರೆಂಬ ಅಂಶವನ್ನು ಸ್ಪಷ್ಟಪಡಿಸಿದೆ.

ಮೇಲ್ಕಂಡ ಕಾರ್ಯದ ಜೊತೆಗೆ ಅಧಿಕಾರಿ/ಶಿಕ್ಷಕ/ಸಿಬ್ಬಂದಿಗಳ ದೂರವಾಣಿ ಸಂಖ್ಯೆಯನ್ನು [ಸ್ಥಿರ/ಮೊಬೈಲ್] ಸಹ ನಮೂದಿಸಲು ತಿಳಿಸಿದೆ.

ಆಯುಕ್ತರು
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, (ಇ-ಆಡಳಿತ) ಬಹುಮಹಡಿಗಳ ಕಟ್ಟಡ, ಬೆಂಗಳೂರು-1 ರವರಿಗೆ ಗೌರವಪೂರ್ವಕವಾಗಿ ಮಾಹಿತಿಗಾಗಿ ಸಲ್ಲಿಸಿದೆ.
2) ರಾಜ್ಯ ಯೋಜನಾ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ, ಬೆಂಗಳೂರು ಇವರಿಗೆ ಗೌರವಪೂರ್ವಕವಾಗಿ ನೀಡಿದೆ.
3) ಅಪರ ಆಯುಕ್ತರು, ಧಾರವಾಡ ಮತ್ತು ಕಲಬುರಗಿ ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
4) ನಿರ್ದೇಶಕರು, ಕೆ.ಎಸ್.ಇ.ಇ.ಬಿ. ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
5) ನಿರ್ದೇಶಕರು, ಡಿ.ಎಸ್.ಇ.ಆರ್.ಟಿ. ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
6) ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪ ಸಂಖ್ಯಾತ ಭಾಷೆಗಳು, ಬೆಂಗಳೂರು ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
7) ಜಂಟಿ ನಿರ್ದೇಶಕರು (ಮಧ್ಯಾಹ್ನ ಉಪಹಾರ ಯೋಜನೆ) ಇವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
8) ರಾಜ್ಯದ ಎಲ್ಲಾ ಉಪನಿರ್ದೇಶಕರು(ಆಡಳಿತ) ಇವರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
9) ರಾಜ್ಯದ ಎಲ್ಲಾ ಪ್ರಾಂಶುಪಾಲರು (ಡಯಟ್) ಇವರುಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
10) ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ.
11) ಕಛೇರಿ ಪ್ರತಿ.